# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ ಕುಶಾಲಪ್ಪ.ಎಂ.ಪಿ (ಸುಜಾ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 999 (898) |
| ಉತ್ತರಿಸಬೇಕಾದ ದಿನಾಂಕ | : 23.02.2024 |
| ಉತ್ತರಿಸಬೇಕಾದವರು | : ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 3 ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಗ್ರಾಮೀಣ ಭಾಗದ ಮಕ್ಕಳ ವ್ಯಾಸಂಗಕ್ಕಾಗಿ ವಸತಿ ನಿಲಯಗಳ ನಿರ್ಮಾಣ ಮಾಡಲು ಬಿಡುಗಡೆಯಾದ ಅನುದಾನವೆಷ್ಟು;</td><td rowspan="2">ಕೊಡಗು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ 03 ಪರಿಶಿಷ್ಟ ಜಾತಿ ಸರ್ಕಾರಿ ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ರೂ.599.85 ಲಕ್ಷಗಳಿಗೆ ಮಂಜೂರಾತಿ ನೀಡಿ, ರೂ.149.97 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಕಾಮಗಾರಿಗಳ ಭೌತಿಕ ಪ್ರಗತಿ ವಿವರ ಈ ಕೆಳಕಂಡಂತಿದೆ.<br>
(ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ.</th><th>ವಿದ್ಯಾರ್ಥಿ ನಿಲಯದ ವಿವರ</th><th>ಮಂಜೂರಾತಿ ಮೊತ್ತ</th><th>ಬಿಡುಗಡೆ ಮೊತ್ತ</th><th>ಕಾಮಗಾರಿಯ ಪ್ರಸ್ತುತ ಹಂತ</th></tr>
<tr><td>1</td><td>ವಿರಾಜಪೇಟೆ ತಾಲ್ಲೂಕಿನ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಪೊನ್ನಂಪೇಟೆ.</td><td>199.95</td><td>49.99</td><td>ಗೋಡೆ ಕಾಮಗಾರಿ ಪ್ರಗತಿಯಲ್ಲಿರುತ್ತದೆ.</td></tr>
<tr><td>2</td><td>ವಿರಾಜಪೇಟೆತಾಲ್ಲೂಕಿನ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ಪೊನ್ನಂಪೇಟೆ.</td><td>199.95</td><td>49.99</td><td>ತಳಪಾಯ ಕಾಮಗಾರಿ ಪ್ರಗತಿಯಲ್ಲಿರುತ್ತದೆ.</td></tr>
<tr><td>3</td><td>ವಿರಾಜಪೇಟೆ ತಾಲ್ಲೂಕಿನ ಮೆಟ್ರಿಕ್ ಪೂರ್ವಬಾಲಕರ ವಿದ್ಯಾರ್ಥಿ ನಿಲಯ, ವಿರಾಜಪೇಟೆ</td><td>199.95</td><td>49.99</td><td>ಗೋಡೆ ಕಾಮಗಾರಿ ಪ್ರಗತಿಯಲ್ಲಿರುತ್ತದೆ.</td></tr>
<tr><td></td><td></td><td>599.85</td><td>149.97</td><td></td></tr>
</table></td></tr>
<tr><td>ಆ)</td><td>ಬಿಡುಗಡೆಯಾದ ಅನುದಾನದ ಕಾಮಗಾರಿ ಯಾವ ಹಂತದಲ್ಲಿದೆ; ಬಾಕಿ ಉಳಿದಿರುವ ಅನುದಾನವೆಷ್ಟು:</td></tr>
<tr><td>ಇ)</td><td>ವಸತಿ ನಿಲಯಗಳ ಗುಣಮಟ್ಟ ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?</td><td>ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಿರ್ವಹಿಸಲಾಗುತ್ತಿರುವ ವಿದ್ಯಾರ್ಥಿನಿಲಯಗಳ ಗುಣಮಟ್ಟವನ್ನು ಸುಧಾರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ:-<br><br>
1. ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಊಟೋಪಚಾರವನ್ನು ನೀಡಲು ಮೂರು ವಿಭಾಗವಾರು (ಕರಾವಳಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ) ಪರಿಷ್ಕೃತ ಮೆನು ಚಾರ್ಟ್ ನಂತೆ ವಿದ್ಯಾರ್ಥಿಗಳಿಗೆ ಊಟೋಪಚಾರವನ್ನು ನೀಡಲಾಗುತ್ತಿದೆ.<br><br>
2. ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಪಕವಿ 2023 ಬೆಂಗಳೂರು ದಿನಾಂಕ: 05-05-2023 ರಲ್ಲಿ ಪ್ರತಿ ನಿಲಯದಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿಯೇ Mess Committee ಅನ್ನು ರಚಿಸಿ, ಗುಣಮಟ್ಟ ಕಾಯ್ದುಕೊಳ್ಳಲಾಗಿರುತ್ತದೆ. ಹಾಗೂ ವಿದ್ಯಾರ್ಥಿನಿಲಯಗಳಲ್ಲಿನ ಶೌಚಾಲಯ ಸ್ವಚ್ಛತೆ ಹಾಗೂ ನೈರ್ಮಲ್ಯದ ಕುರಿತಾಗಿ Sanitazition committee ಯನ್ನು ರಚಿಸಲಾಗಿರುತ್ತದೆ.<br><br>
3. ಆಹಾರ ಪದಾರ್ಥ ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡುವ ಬಗ್ಗೆ ಪರಿಷ್ಕೃತ ಆದೇಶವನ್ನು ಹೊರಡಿಸಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ: ಸಕಇ 97 ಪಕವಿ 2023. ದಿನಾಂಕ: 28-07-2023)</td></tr>
</table>

| | | |
|---|---|---|
| | | 4. ಸುತ್ತೋಲೆ ಸಂಖ್ಯೆ:SWD/EDU/ED-7/20/2023/1065640 ರಲ್ಲಿ Freak Rate ನಮೂದಿಸುವ Bid ದಾರರನ್ನು ತಿರಸ್ಕರಿಸಲು ಮಾರ್ಗಸೂಚಿ ಹೊರಡಿಸಲಾಗಿರುತ್ತದೆ.<br><br>5. ಸುತ್ತೋಲೆ ಸಂಖ್ಯೆ:SWD/EDU/ED7/20/2023/1065640, ದಿನಾಂಕ:07-10-2023ರಲ್ಲಿ ಗುತ್ತಿಗೆದಾರರು ಸರಬರಾಜು ಮಾಡುವ ಆಹಾರ ಪದಾರ್ಥಗಳ ಮಾದರಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಪ್ರದರ್ಶಿಸಲು ಸುತ್ತೋಲೆ ಹೊರಡಿಸಲಾಗಿರುತ್ತದೆ.<br><br>6. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: 198 ಆರ್ & ಐ 2022. ದಿನಾಂಕ: 21-12-2023 ರನ್ವಯ ಪ್ರತಿ ಜಿಲ್ಲೆಗೂ ರಾಜ್ಯ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜನೆ ಮಾಡಲಾಗಿರುತ್ತದೆ.<br><br>7. ಸರ್ಕಾರದ ಆದೇಶ ಸಂಖ್ಯೆ SWD/EDU/ED4/80/2023 C-1161067 ದಿನಾಂಕ:15-09-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶೀಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಭೇಟಿ ನೀಡಿ ವರದಿ ಮಾಡುವಂತೆ ಆದೇಶಿಸಿದೆ.<br><br>8. ಜಿಲ್ಲಾ ಮಟ್ಟದ ಅಧಿಕಾರಿಗಳು ಖುದ್ದು ಭೇಟಿ ನೀಡಿ ರುಚಿ/ಸಾಧಾರಣ ರುಚಿ ಹೊಂದಿರುವ ನಿಲಯಗಳಿಗೆ ಭೇಟಿ ನೀಡಿದ ಸಮಯದಲ್ಲಿ Taste Rigister ನಲ್ಲಿ ನಮೂದಿಸಿ, ವರದಿ ಮಾಡಲು ಆಯುಕ್ತರಿಂದ ದಿನಾಂಕ:19-09-2023 ರಲ್ಲಿ ಸುತ್ತೋಲೆ ಹೊರಡಿಸಲಾಗಿದೆ.<br><br>9. ವಸತಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗೆ ಆಹಾರ ತಯಾರಿಕೆ ಹಾಗೂ ಶುಚಿತ್ವ ಕಾಪಾಡುವ ಬಗ್ಗೆ ಜಿಲ್ಲಾ ಹಂತದಲ್ಲಿ ತರಬೇತಿ ನೀಡಲು ಆದೇಶ ಹೊರಡಿಸಲಾಗಿರುತ್ತದೆ.<br><br>10. ಮುಂದುವರೆದು, ಪಡಿತರ ಆಹಾರ ಧಾನ್ಯಗಳನ್ನು ಮಾಹೆಯಾನ ಎತ್ತುವಳಿ ಮಾಡಿ ಸದರಿ ಎತ್ತುವಳಿಯಾದ ಆಹಾರ ಪದಾರ್ಥಗಳನ್ನು ಸ್ವಚ್ಛಗೊಳಿಸಿ ದಾಸ್ತಾನು ಕೊಠಡಿಯಲ್ಲಿ ಸುರಕ್ಷಿತವಾಗಿ ಶೇಖರಿಸಿಡುವಂತೆಯೂ ಸಹ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.<br><br>11. ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯವಲಯದಿಂದ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.<br><br>12. ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರೆ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ, |

**ಸಕಇ 115 ಪಕವಿ 2024**

**(ಡಾ|| ಹೆಚ್.ಸಿ ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**